ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಂಡೂರು

ಸಿ.ಸಿ. ನಂ. 528/2015

ಸಿ.ಡಬ್ಲ್ಯು.: 2
ಪಿ.ಡಬ್ಲ್ಯು.: 2

**ದಿ: 23-07-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

ಸಾಕ್ಷಿಯ ಹೆಸರು : ಶಂಕಣ್ಣ

ತಂದೆಯ ಹೆಸರು : ಹೂನ್ನುರಪ್ಪ

ವಯಸ್ಸು : 61 ವರ್ಷ

ಉದ್ಯೋಗ : ಚಾಲಕ

ವಾಸಸ್ಥಳ : ತೋರಣಗಲ್ಲು

**ಸಾಕ್ಷಿಯ ಮುಖ್ಯ ವಿಚಾರಣೆ : ಸ.ಸ.ಅ.ರವರಿಂದ:**

ಸುಮಾರು 10 ವರ್ಷಗಳ ಹಿಂದೆ ನಾನು ತೋರಣಗಲ್ಲು ಪೋಲಿಸ ಠಾಣೆಗೆ ಬೆರೆ ಕೆಲಸಕ್ಕೆ ಹೋದಾಗ ಪೋಲಿಸರು ನನ್ನ ಒಂದು ಸಹಿ ಪಡೆದಿರುತ್ತಾರೆ. ಯಾವ ಕಾರಣಕ್ಕೆ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಮತ್ತು ಯಾವುದೆ ವಸ್ತು ಜಪ್ತು ಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಪಂಚನಾಮೆಯನ್ನುಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಬರೆದಿವ ವಿಷಯ ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ. ರವರು ಅನುಮತಿ ಕೋರಿರುತ್ತಾರೆ. ಆದ್ದರಿಂದ ಅವರಿಗೆ ಅನುಮತಿ ನೀಡಲಾಯಿತು)**

**ಪಾಟಿ ಸವಾಲು : ಸ.ಸ. ಅ. ರವರಿಂದ:**

ದಿ. 06.07.2014 ರಂದು ಚಪ್ಪರದಹಳ್ಳಿ ಪೋಲಿಸ ನನ್ನ ಮತ್ತು ಚಾಸಾ 3 ರವರು ಸಮಕ್ಷಮ ಮಃ 01.45 ರಿಂದ 02.45 ಗಂಟೆಯವರೆಗೆ ಪೋಲಿಸರು ಪಂಚನಾಮೆ ಮಾಡಿ ನನ್ನ ಸಹಿಯನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಕಾಲಕ್ಕೆ ಒಂದು ಬೀಗದ ಪತ್ತ ಜಪ್ತು ಪಡಿಸಿಕೂಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಸ್ಥಳದಲ್ಲಿ ಹಾಜರಿದ್ದು ಎಲ್ಲಾ ವಿಚಾರಣೆ ತಿಳಿದುಕೊಂಡು ನಿಪಿ-2 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರಃ ಇಲ್ಲ.**

**ಮರು ವಿಚಾರಣೆಃ ಇಲ್ಲ.**

( ಈ ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಲ್ಲಿ ಹೇಳಿ ಬೆರಳಚ್ಚು ಮಾಡಿಸಲಾಯಿತು )

ಓ. ಹೆ. ಕೆ.ಸರಿ ಇದೆ.

ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಸಂಡೂರು.